

ಅರುಣ ಪಿ. ಭಟ್ಟ

## ವಾರಭವಿಷ್ಯ 2.1.2020ರಿಂದ 8.1.2020ರವರೆಗೆ




ಆರಂಭದ ಎರಡು ದಿನದಲ್ಲಿ ಕಾರ್ಯಸಿದ್ಧಿ. ಬಂಧುಗಳ ಆಗಮನದಿಂದ ಕುಟುಂಬದಲ್ಲಿ ಸಂತಸ. ಮನೆ ಬಾಡಿಗೆಯಿಂದ ಧನಲಾಭ. ರಾಜಕೀಯ ಅಧಿಕಾರ ಕೈ ತಪ್ಪಿ ಹೋಗುವ ಸಾಧ್ಯತೆ. ಗ್ರಂಥರಚನೆಯಲ್ಲಿ ಆಸಕ್ತಿ. ಮಕ್ಕಳಿಂದ ಮಾನಸಿಕ ಕಿರಿಕಿರಿ.

ಶುಭದಿನ: 6. ಶ್ರೀ ಲಕ್ಷ್ಮೀನರಸಿಂಹ ಪಂಚರತ್ನ ಓದಿರಿ.




ವಾರದ ಪ್ರಾರಂಭದಲ್ಲಿ ಪ್ರವಾಸದಿಂದ ಗೃಹಾಗಮನ. ಸಹೋದರಿಯರಿಂದ ಶುಭವಾರ್ತೆ. ಹಸ್ತಾಲಂಕಾರ ವಸ್ತು ಖರೀದಿ. ವಾರ ಮಧ್ಯದಲ್ಲಿ ಜ್ವರ ಪೀಡೆ ವೈದ್ಯಕೀಯ ಖರ್ಚು. ಕೋರ್ಟ್ ಪ್ರಕರಣದಲ್ಲಿ ಗೆಲುವು. ಅವಮಾನಕರ ಪ್ರಸಂಗ.

ಶುಭದಿನ 5. ಅಷ್ಟಮಶನಿ ಪೀಡೆ ನಿವಾರಣೆಗೆ 1008 ತಿಲಾರ್ಚನೆ ಮಾಡಿರಿ.




ದೈಹಿಕ ಜಾಡ್ಯ ಅಲರ್ಜಿ. ವಿನಾಕಾರಣ ಹೆದರಿಕೆ. ಆದರೆ ಬಹುದಿನಗಳ ನಂತರ ಕುಟುಂಬದಲ್ಲಿ ಸಂತೋಷದ ಸಮಾರಂಭ. ಕಲಾವಿದರು ಮತ್ತು ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಯಶಸ್ಸು. ಉತ್ತಮ ವಾಗ್ಜರಿ ಪ್ರದರ್ಶನ. ಮಾನ ಸನ್ಮಾನ.

ಶುಭದಿನ: 4. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.




ವಾರದ ಪ್ರಾರಂಭದಲ್ಲಿ ಮನೆಕಟ್ಟುವ ಸಮಸ್ಯೆ ಬಗೆಹರಿಯುವುದು. ಕ್ರಯ ವಿಕ್ರಯದಲ್ಲಿ ವಂಚನೆ ನಡೆಯುವ ಸಂಭವ ಜಾಗ್ರತೆ. ವಾರವಿಡೀ ಒಂದಿಲ್ಲೊಂದು ವಿವಾದದಲ್ಲಿ ಸಿಲುಕುವಿರಿ. ತಂದೆಯಿಂದ ಹಣಕಾಸಿನ ಸಹಾಯ ಸಾಧ್ಯತೆ.

ಶುಭದಿನ: 8. ಗುರುದತ್ತಾತ್ರೆಯ ಆರಾಧನೆ ಮಾಡಿ.




ಶಾರೀರಿಕ ಮಾನಸಿಕ ಉತ್ಸಾಹ ವೃದ್ಧಿಸುವದು. ಸರಕಾರಿ ಕೆಲಸಗಳು ತ್ವರಿತಗತಿಯಲ್ಲಿ ನಡೆಯುವುದು. ಪರಿಚಿತ ಸ್ತ್ರೀ ವಿರೋಧ ಕಾಣಿಸುವುದು. ಪಶುಗಳ ವಿಕ್ರಿಯದಾರರಿಗೆ ಲಾಭ. ಹೊಟ್ಟೆನೋವಿನ ಪ್ರಸಂಗ. ಅಜ್ಞಾತವಾಸದಿಂದ ಬಿಡುಗಡೆ.

ಶುಭದಿನ: 7. ಹನುಮಾನ್ ಚಾಲೀಸ್ ಪಠಿಸಿರಿ.




ಅನಿರೀಕ್ಷಿತ ಖರ್ಚಿನ ಪ್ರಸಂಗ. ಸರಕಾರಿ ಕೆಲಸದಲ್ಲಿ ವ್ಯತ್ಯಯ. ಸೇವಕರಿಂದ ಹಾನಿ, ತೊಂದರೆ. ಬಂಧುಗಳಿಗೆ ಆಪತ್ತು. ಮನೆಕೆಲಸ ಅರ್ಧಕ್ಕೆ ನಿಲ್ಲುವುದು. ಪ್ರೇಮ ಪ್ರಸಂಗಗಳಲ್ಲಿ ಭಗ್ನತೆ. ಅಧಿಕಾರಿಗಳಿಗೆ ಹಿನ್ನಡೆ.

ಶುಭದಿನ: 6. ಗೋಪೂಜೆ, ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.




ವಾರದಲ್ಲಿಯೇ ಉತ್ತಮ ಫಲ ಪ್ರಾಪ್ತಿಯ ರಾಶಿ. ಆಕಸ್ಮಿಕ ಧನಲಾಭ. ನಿರುದ್ಯೋಗಿಗಳಿಗೆ ಉದ್ಯೋಗ ಸಿಗುವುದು. ಸಂತತಿ ಇಲ್ಲದವರಿಗೆ ಸಂತತಿಯ ಸೂಚನೆ. ವಿವಾಹಾಪೇಕ್ಷಿಗಳಿಗೆ ಸಂಗಾತಿ ಲಭ್ಯ. ಮನೆಕೆಲಸದ ಹೊಸ ಸೇವಕರು ಸಿಗುವರು.

ಶುಭದಿನ: 4. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಸಾಡೆಸಾತಿಯ ಕೊನೆ ಹಂತ ಪ್ರಾರಂಭವಾಗಿದೆ. ಕಷ್ಟದಲ್ಲೂ ಇಷ್ಟ ಫಲ ಪ್ರಾಪ್ತಿಯಾಗುವುದು. ಪರದೇಶ ಪ್ರವಾಸಕ್ಕೆ ಸಿದ್ಧತೆ ನಡೆಯುವದು. ಸರಕಾರಿ ಅಧಿಕಾರ ಪ್ರಾಪ್ತಿಯೋಗ. ಶಿಕ್ಷಕರಿಗೆ ಪದೋನ್ನತಿ ವರ್ಗಾವಣೆ ಸಂಭವ. ಪ್ರಾಣಾಪಾಯ ಭೀತಿ.

ಶುಭದಿನ: 6. ದುರ್ಗಾ ಆರಾಧನೆ ಮಾಡಿರಿ.




ಆರೋಗ್ಯದಲ್ಲಿ ಏರುಪೇರು. ಹೆಂಡತಿಯೊಡನೆ ಜಗಳ. ಕಚೇರಿ ಕಾಗದ ಪತ್ರಗಳು ಹಠಾತ್ ಕಾಣೆಯಾಗುವಿಕೆ. ದೂರದಿಂದ ಅಶುಭವಾರ್ತೆ ಬರುವುದು. ದೈನಂದಿನ ಕೆಲಸಗಳು ಸರಾಗ. ದಿಢೀರ್ ಹಿರಿಯರ ಅಧಿಕಾರಿಗಳ ಆಗಮನ. ದ್ರವ್ಯ ಲಾಭ.

ಶುಭದಿನ: 2. ಗಣಪತಿಗೆ 1008 ದೂರ್ವಾರ್ಚನೆ ಮಾಡಿರಿ.




ಅಕಸ್ಮಾತ್ ಪೂರ್ವದಿಕ್ಕಿನಲ್ಲಿ ಅಪಘಾತ ಭಯ. ಕಾಲು ನೋವಿನ ಸಮಸ್ಯೆ. ಕೌಟುಂಬಿಕ ಖರ್ಚು ಜಾಸ್ತಿಯಾಗುವುದು. ಶತ್ರುಗಳು ತಲೆ ತಗ್ಗಿಸುವರು. ಹಳೆಯ ಮಿತ್ರರ ಆಗಮನ. ಮಕ್ಕಳಿಂದ ಶುಭವಾರ್ತೆ. ದಾಂಪತ್ಯ ಸೌಖ್ಯ. ಹಣಕಾಸಿನ ಲಭ್ಯತೆ.

ಶುಭದಿನ: 4. ನವಗ್ರಹ ಸ್ತೋತ್ರ ಮಾಡಿರಿ.




ಪ್ರಾರಂಭದಿಂದಲೂ ಶುಭಯೋಗ. ಯಾಂತ್ರಿಕ ವಸ್ತುಗಳ ಖರೀದಿ. ಬ್ಯಾಂಕ್ ನೌಕರರಿಗೆ ವರ್ಗಾವಣೆ ಸಂಭವ. ಕೈಗೊಂಡ ಕೆಲಸಗಳಲ್ಲಿ ನಿರೀಕ್ಷೆಗಿಂತ ಲಾಭ. ಗುತ್ತಿಗೆದಾರರು ಉತ್ತಮ ಧನ ಲಾಭ ಕಾಣುವಿರಿ. ಮಿತ್ರರಿಂದ ವಂಚನೆ ಸಂಭವ.

ಶುಭದಿನ: 3. ನಾಗಫಣಿ ಪೂಜೆ ಕ್ಷೀರಾಭಿಷೇಕ ಮಾಡಿರಿ.




ವಿನಾಕಾರಣ ಶತ್ರುಗಳಾಗುವರು. ಕಲಾವಿದರಿಗೆ ಸಂಗೀತಗಾರರಿಗೆ ಉತ್ತಮ. ಸೊಂಟನೋವು ಕಾಣಿಸುವುದು. ಮಕ್ಕಳ ಆರೋಗ್ಯದಲ್ಲಿ ಕೊಂಚ ಪ್ರಗತಿ. ವಿದ್ಯಾರ್ಥಿಗಳಿಗೆ ಅಭ್ಯಾಸದಲ್ಲಿ ಹಿನ್ನಡೆ. ವಾಹನ ಚಾಲಕರಿಗೆ ಎಚ್ಚರ ಅಗತ್ಯ.

ಶುಭದಿನ: 4. ಆದಿತ್ಯ ಹೃದಯ ಏಳು ಸಾರೆ ಪಠಿಸಿರಿ. ಗೋಪೂಜೆ ಮಾಡಿರಿ.

DHEEPAM
LAMP OIL
BLEND OF 5 OILS
ದೀಪದ ಬೆಳಕಲ್ಲಿ
ಒಂದು ದೈವೀಕ
ಅನುಭವ
ಸುಗಂಧ ಸುವಾಸನೆ
ಹರಡುವ ಪಂಚ ದೀಪ ಎಣ್ಣೆ
